ಅ) ಹಾಗಿದ್ದಲ್ಲಿ ಸಮಿತಿ ತೀರ್ಮಾನಿಸಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯವರು ಕರಡು ನಿಯಮಾವಳಿಗಳನ್ನು ಪ್ರಕಟಿಸಿರುವುದು ನಿಜವೇ;

ಇ) ನಿಜವಾಗಿದ್ದಲ್ಲಿ ವೇತನ ಶ್ರೇಣಿ ಸಹಿತ ಸೀನಿಯರ್ ಗ್ರೇಡ್-1 ಹುದ್ದೆಗಳನ್ನು ಸೃಜನೆ ಮತ್ತು ಬಡ್ತಿ ಕುರಿತಂತೆ ಅಂತಿಮ ನಿಯಮಾವಳಿಗಳನ್ನು ಪ್ರಕಟಿಸಲು ವಿಳಂಬ ಉಂಟಾಗಿರುವುದಕ್ಕೆ ಕಾರಣಗಳೇನು? (ವಿವರ ನೀಡುವುದು)

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :—

ಅ) 20 ವರ್ಷ ಸೇವೆ ಸಲ್ಲಿಸಿದ ದೈಹಿಕ ಶಿಕ್ಷಕರಿಗೆ (ಸಿ.ಪಿ.ಎಡ್.) ಮುಂಬಡ್ತಿ ಅವಕಾಶ ಕಲ್ಪಿಸುವ ಉದ್ದೇಶದಿಂದ ಹುದ್ದೆಗಳನ್ನು ಉನ್ನತೀಕರಿಸಲು ಹಾಗೂ 20 ವರ್ಷ ಸೇವೆ ಸಲ್ಲಿಸಿದವರಿಗೆ ಮುಂಬಡ್ತಿ ನೀಡಲು ನಿಯಮಗಳಲ್ಲಿ ಸೂಕ್ತ ಅವಕಾಶ ಕಲ್ಪಿಸಲು ಉನ್ನತ ಮಟ್ಟದ ಸಮಿತಿ ತೀರ್ಮಾನಿಸಿದೆ.

ಆ) ಇಲ್ಲ

ಇ) ಉನ್ನತ ಸಮಿತಿಯ ತೀರ್ಪಿಗೆ ಅನುಗುಣವಾಗಿ ವ್ಯಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲಾಗುತ್ತಿದೆ. ಅಂತಿಮ ಅಧಿಸೂಚನೆ ಹೊರಡಿಸಿದ ನಂತರ ಮುಂದಿನ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ರಾಜ್ಯದ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಹೆಚ್ಚುವರಿ ತರಗತಿಗಳು.

50(40) ಶ್ರೀ ಯು.ಆರ್. ಸಭಾಪತಿ (ಉಡುಪಿ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ವಿಭಾಗಗಳಲ್ಲಿ ಹೆಚ್ಚುವರಿ ತರಗತಿ ತೆರೆಯಲು ಕೋರಿರುವ ಪ್ರಸ್ತಾವನೆಗಳು ಎಷ್ಟು. (ಜಿಲ್ಲಾವಾರು ಮಾಹಿತಿ ನೀಡುವುದು)

ಆ) ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸಾಂದರ್ಭಿಕ ಪರಿಸ್ಥಿತಿಯಿಂದ ಮೇಲೆ ತಿಳಿಸಿದ ಪ್ರಸ್ತಾವನೆಗಳಿಗೆ ಅನುಮತಿ ನೀಡುವಲ್ಲಿ ಸರ್ಕಾರ ಕ್ರಮ ಕೈಗೊಳ್ಳುವುದೇ.

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :—

ಅ) ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ 55 ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ 25 ಪ್ರಸ್ತಾವನೆಗಳು ಬಂದಿರುತ್ತವೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1ರಲ್ಲಿ ನೀಡಲಾಗಿದೆ.

ಆ) ಈ ಪ್ರಸ್ತಾವನೆಗಳು ಸರ್ಕಾರದ ಪರಿಶೀಲನೆಯಲ್ಲಿರುತ್ತವೆ.